ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ತರೀಕೆರೆ

ಸಿ.ಸಿ.ನಂ.586/2024

ಚಾಸಾ: 3 ಪ್ರಾಸಾ: 1

ದಿನಾಂಕಃ 13.08.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು- | ರಾಘವೇಂದ್ರ |
| ತಂದೆಯ ಹೆಸರು- | ಬೀರೇಗೌಡ |
| ವಯಸ್ಸು - | 41 ವರ್ಷ |
| ಉದ್ಯೋಗ- | ಖಾಸಗಿ ಕೆಲಸ |
| ವಾಸ- | ತರೀಕೆರೆ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

**1.** ಈಗ ಕೆಲವು ದಿನಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಪೊಲೀಸರು ಒಂದು ದಾಖಲೆಗೆನನ್ನ ಸಹಿ ಪಡೆದಿರುತ್ತಾರೆ. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ ಮತ್ತು ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಪಂಚನಾಮೆಯನ್ನು ನಿಪಿ-1 ಹಾಗೂ ಸಾಕ್ಷಿಯ ಸಹಿಯನ್ನು 1(ಎ) ಎಂದು ಗುರುತಿಸಲಾಯಿತು. ಅದೇ ರೀತಿ ಭಾವಚಿತ್ರವನ್ನು ನಿಪಿ.2 ಎಂದು ಗುರುತಿಸಲಾಯಿತು. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷ್ಯ ನುಡಿದಿರುತ್ತಾರೆ ಎಂದು ಹೇಳಿ ಸಾಕ್ಷಿಗೆ ಪಾಟೀ ಸವಾಲು ಮಾಡಲು ಮಾನ್ಯ ಎಪಿಪಿ ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

**2.** ದಿನಾಂಕ 07.08.2024 ರಂದು ಬೆಳಗ್ಗೆ 11.50ರ ರಿಂದ ಮಧ್ಯಾಹ್ನ 1.00 ಸಮಯದಲ್ಲಿ ಪೋಲೀಸರು ಆರೋಪಿಯ ಮೇಲೆ ದಾಳಿ ಮಾಡಿ ಆತನ ವಶದಿಂದ ನಗದು ಹಣ , ಮಟ್ಕಾ ಚೀಟಿ ಮತ್ತು ಪೆನ್ನನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಸ್ಥಳದಲ್ಲಿಯೇ ಪಂಚನಾಮೆಯನ್ನು ಬರೆದು ನನ್ನ ಸಹಿಯನ್ನು ಪಡೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ಪಂಚನಾಮೆ ಮಾಡಿದ ಬಗ್ಗೆ ಭಾವಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ. ಅದೇ ರೀತಿ ಈ ಕುರಿತು ನಾನು ಪೋಲೀಸರ ಮುಂದೆ ದಿನಾಂಕ 07-08-2024 ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಈಗ ನಿಪಿ.3 ಎಂದು ಗುರುತಿಸಲಾಯಿತು. ನನಗೆ ನಿಪಿ.1 ರಿಂದ 3 ರಲ್ಲಿ ಬರೆದಿರುವ ವಿಚಾರಗಳು ಗೊತ್ತಿದ್ದರೂ ಸಹ

ಆರೋಪಿ ನಮ್ಮ ಊರಿನ ವ್ಯಕ್ತಿ ಇರುವ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಕೆ ಆರ್ ಆರ್ ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

Sd/-

(ಮುಜಾಫರ್)
ಹಿರಿಯ ಸಿ.ಜೆ. ಮತ್ತು ಜೆಎಂಎಫ್‌ಸಿ
ತರೀಕೆರೆ.